ಕಾಲೇಜುಗಳಲ್ಲಿ ಕೊಠಡಿಗಳ ಕೊರತೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 128 (437)
ಸದಸ್ಯರ ಹೆಸರು : ಶ್ರೀ ಶಿವಶಂಕರ್ ರೆಡ್ಡಿ. ಎನ್.ಹೆಚ್ (ಗೌರಿಬಿದನೂರು)
ಉತ್ತರಿಸುವ ಸಚಿವರು : ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಮಾನ್ಯ ಉನ್ನತ ಸಚಿವರು)

ಪ್ರಶ್ನೆಗಳು:

ಅ) ಗೌರಿಬಿದನೂರು ತಾಲ್ಲೂಕಿನಲ್ಲಿರುವ ಪ್ರಥಮದರ್ಜೆ ಕಾಲೇಜಿನ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು: (ವಿವರ ನೀಡುವುದು); ಈ ಕಾಲೇಜಿನ ವಿಜ್ಞಾನ ವಿಭಾಗದಲ್ಲಿ ಕೇವಲ 4 ಕೊಠಡಿಗಳು ಮಾತ್ರ ಇದ್ದು, ಕೊಠಡಿಗಳ ಕೊರತೆಯಿಂದ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಕೊಠಡಿಯ ನಿರ್ಮಾಣಕ್ಕೆ ಈಗಾಗಲೇ ಸರ್ಕಾರವು ರೂ. 115 ಕೋಟಿ ಹಣವನ್ನು ಬಿಡುಗಡೆ ಮಾಡಿದ್ದು, ಈ ಪೈಕಿ ಗೌರಿಬಿದನೂರು ತಾಲ್ಲೂಕಿನ ಕಾಲೇಜುಗಳಿಗೂ ಸಹ ಕೊಠಡಿ ನಿರ್ಮಿಸಲು ಅನುದಾನ ಬಿಡುಗಡೆ ಮಾಡಲಾಗಿದೆಯೇ (ವಿವರ ಒದಗಿಸುವುದು);

ಇ) 10 ಕೋಠಡಿಗಳನ್ನಾದರೂ ನಿರ್ಮಾಣ ಮಾಡಲು ಸರ್ಕಾರವು ಉದ್ದೇಶಿಸಿದೆಯೇ?

ಉತ್ತರಗಳು:

ಅ) ಗೌರಿಬಿದನೂರು ತಾಲ್ಲೂಕಿನಲ್ಲಿರುವ ಪ್ರಥಮದರ್ಜೆ ಕಾಲೇಜಿನ ವಿದ್ಯಾರ್ಥಿಗಳ ಒಟ್ಟು ಸಂಖ್ಯೆ: 1410.
ಬಂದಿದೆ.

ಆ) ನಿವೇಶನ ದೊರೆತ ಕಾಲೇಜುಗಳಿಗೆ ವಿಜ್ಞಾನ ಸಂಯೋಜನೆ ಹೊಂದಿರುವ ಕಾಲೇಜುಗಳಿಗೆ ಕೊಠಡಿ ಮತ್ತು ಪ್ರಯೋಗಾಲಯ ನಿರ್ಮಾಣ ಹಾಗೂ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿರುವ ಕಡೆ ಹೆಚ್ಚುವರಿ ಕೊಠಡಿ ನಿರ್ಮಾಣ ಹೀಗೆ ಅನುಮೋದಿತ ಅನುದಾನದಲ್ಲಿ

ಕ್ರಿಯಾ ಯೋಜನೆ ಸಿದ್ಧಪಡಿಸಿ ಶೀಘ್ರವೇ ಕಟ್ಟಡ ಕಾಮಗಾರಿ ಪ್ರಕ್ರಿಯೆ ಪ್ರಾರಂಭಿಸಲಾಗುವುದು.

ಇ) ಅಗತ್ಯಾನುಸಾರ ಕ್ರಿಯಾ ಯೋಜನೆ ಸಿದ್ದಪಡಿಸಲಾಗುತ್ತಿದೆ.

ಶಾಲಾ ಶಿಕ್ಷಕರುಗಳಿಗೆ 1 ನೇ ತಾರೀಖಿನಂದೇ ವೇತನ ಪಾವತಿ ಮಾಡುವ ಕುರಿತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 129 (106)
ಸದಸ್ಯರ ಹೆಸರು : ಶ್ರೀ ಶ್ರೀನಿವಾಸ್. ಎಂ (ಮಂಡ್ಯ)
ಉತ್ತರಿಸುವ ಸಚಿವರು : ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಪ್ರಶ್ನೆಗಳು:

ಅ) ರಾಜ್ಯದಲ್ಲಿ ಶಾಲಾ ಶಿಕ್ಷಕರುಗಳಿಗೆ 1ನೇ ತಾರೀಖಿನಂದೇ ವೇತನ ಪಾವತಿಯಾಗುವಂತೆ ಶಿಕ್ಷಣ ಇಲಾಖೆಯು ಆದೇಶ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಶಿಕ್ಷಕರ ವೇತನವು ನಿಗದಿತ ದಿನಾಂಕದಂದು ಪಾವತಿಯಾಗುತ್ತಿದೆಯೇ?

ಇ) ಶಿಕ್ಷಕರಿಗೆ ವೈದ್ಯಕೀಯ ವೆಚ್ಚದ ಮರು ಪಾವತಿಗೆ ಕೋಟ್ಯಾಂತರ ರೂಪಾಯಿಯ ಅನುದಾನದ ಅಗತ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ, ಅಗತ್ಯವಿರುವ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರಕ್ಕಿರುವ ತೊಂದರೆಗಳೇನು?

ಉ) ಮಂಡ್ಯ ಜಿಲ್ಲೆಯ ಶಿಕ್ಷಕರುಗಳಿಗೆ ವೈದ್ಯಕೀಯ ವೆಚ್ಚದ ಮರುಪಾವತಿಗೆ ಬಿಲ್ಲುಗಳು ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಊ) ಹಾಗಿದ್ದಲ್ಲಿ, ಮರುಪಾವತಿಗೆ ಬೇಕಾಗಿರುವ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ಕ್ರಮಕೈಗೊಳ್ಳುವುದೇ?

ಉತ್ತರಗಳು: